# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | **929** |
| ಮಾನ್ಯ ಸದಸ್ಯರ ಹೆಸರು | ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.07.2023 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯದಲ್ಲಿರುವ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; | ಪ್ರಸ್ತುತ ರಾಜ್ಯದಲ್ಲಿ ಹಿಂದುಳಿದ ವರ್ಗಗಳ 1161 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಜೂನ್ ಒಂದರಿಂದಲೇ ರಾಜ್ಯದಾದ್ಯಂತ ಪದವಿ ಪೂರ್ವ ಕಾಲೇಜುಗಳು ಆರಂಭವಾಗಿದ್ದರೂ ಸರ್ಕಾರಿ ವಸತಿ ನಿಲಯಗಳಿಗೆ ಪ್ರವೇಶ ಪಡೆಯಲು ಆನ್ ಲೈನ್ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; | ಹೌದು.<br><br>ಪ್ರಸ್ತುತ ಮೆಟ್ರಿಕ್ ನಂತರದ(ಪಿ.ಯು.ಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸುಗಳ) ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಆನ್-ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ:15.07.2023ಆಗಿದ್ದು, ಪ್ರವೇಶ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ಪಿ.ಯು.ಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸುಗಳ ನಂತರ ಪದವಿ, ಸ್ನಾತಕೋತ್ತರ ಮತ್ತು ವೃತ್ತಿಪರ ಕೋರ್ಸುಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಅಹ್ವಾನಿಸಲಾಗುವುದು.<br><br>ವಿದ್ಯಾರ್ಥಿಗಳ ಪ್ರವೇಶಾತಿಯಲ್ಲಿ ಪಾರದರ್ಶಕತೆ ಯನ್ನು ತರಲು 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ ಇಲಾಖಾ ವಿದ್ಯಾರ್ಥಿನಿಲಯಗಳಲ್ಲಿ ಬೇಡಿಕೆ ಹಾಗೂ ಹಂಚಿಕೆಯನ್ನು ಸರಿದೂಗಿಸುವ ನಿಟ್ಟಿನಲ್ಲಿ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ವಿದ್ಯಾರ್ಥಿನಿಲಯಗಳಲ್ಲಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶವನ್ನು ಕಲ್ಪಿಸಲು |
| ಇ) | ಗುಣಮಟ್ಟದ ಶಿಕ್ಷಣ ಹಾಗೂ ಉಚಿತ ವಸತಿ ಸೌಲಭ್ಯ ಸಿಗುವ ಕಾರಣಕ್ಕೆ ಕೆಲವೊಂದು ಜಿಲ್ಲೆಗಳಿಗೆ ಹೊರ ಜಿಲ್ಲೆಗಳಿಂದ ಬಡ ಹಾಗೂ ಮಧ್ಯಮ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಹಾಗೂ ಕೂಲಿ ಕಾರ್ಮಿಕರ ಮಕ್ಕಳು ಪ್ರವೇಶಾತಿ ಪಡೆಯಲು ಅನಾನುಕೂಲ ಮಾಡಿದಂತೆ ಆಗುವುದಿಲ್ಲವೇ; ಹಾಗಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? | |

| | | |
|---|---|---|
| | | ಸರ್ಕಾರದ ಆದೇಶ ಸಂಖ್ಯೆ: ಹಿಂವಕ 230 ಬಿಎಂಎಸ್ 2022, ದಿನಾಂಕ: 21.06.2022 ರಲ್ಲಿ ಪರಿಷ್ಕೃತ ಪ್ರವೇಶ ನಿಯಮಾವಳಿಗಳನ್ನು ಹೊರಡಿಸಲಾಗಿದ್ದು, ಸದರಿ ನಿಯಮಾವಳಿಗಳ ಪ್ರಕಾರ ತಾಲ್ಲೂಕುವಾರು ಆನ್-ಲೈನ್ ಅರ್ಜಿಗಳನ್ನು ಅಹ್ವಾನಿಸಿ, ವಿದ್ಯಾರ್ಥಿನಿಲಯಗಳಲ್ಲಿ ನಿಗದಿಪಡಿಸಿದ ಮಂಜೂರಾತಿ ಸಂಖ್ಯೆಗನುಗುಣವಾಗಿ ಪ್ರವೇಶ ನಿಯಮಗಳನುಸಾರ ಪ್ರವರ್ಗವಾರು ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ಕಲ್ಪಿಸಲಾಗುತ್ತಿದೆ. |

**ಸಂಖ್ಯೆ: ಹಿಂವಕ 342 ಬಿಎಂಎಸ್ 2023**

**(ಶಿವರಾಜ್ ಎಸ್ ತಂಗಡಗಿ )**
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು